ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

862 (1028) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 2 ವರ್ಷದಲ್ಲಿ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಜಾರಿಗೊಳಿಸಲಾಗಿದೆ; ಇದಕ್ಕಾಗಿ ಸರ್ಕಾರ ಖರ್ಚು ಮಾಡಿರುವ ಹಣವೆಷ್ಟು ; ಹಾಗೂ 2020-21ನೇ ಸಾಲಿಗೆ ಈ ಯೋಜನೆಗೆ ಆಯವ್ಯಯದಲ್ಲಿ ನಿಗಧಿ ಮಾಡಿರುವ ಅನುದಾನವೆಷ್ಟು ;

(ಆ) ಕಳೆದ 2 ವರ್ಷಗಳಲ್ಲಿ ಸರ್ಕಾರ ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಿದೆ; ಜಾರಿಗೊಳಿಸಿದ ಯೋಜನೆಯ ಕಾಮಗಾರಿಗಳು ಮುಕ್ತಾಯಗೊಂಡು ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಸಾರ್ವಜನಿಕರ ಉಪಯೋಗಕ್ಕೆ ನೀಡಲಾಗಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ 2 ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಈ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಜಾರಿಗೆ ತರಲಾಗಿದೆ ;

(ಈ) ಇದಕ್ಕಾಗಿ ತುಮಕೂ ರು ಜಿಲ್ಲೆಗೆ ಎಷ್ಟು ಹಣವನ್ನು ಕಳೆದ 2 ವರ್ಷದಲ್ಲಿ ಖರ್ಚು ಮಾಡಲಾಗಿದೆ; ಕಾಮಗಾರಿಗಳು ಪೂರ್ಣಗೊಂಡಿರುವ ಮತ್ತು ಪ್ರಗತಿಯಲ್ಲಿರುವ ಬಗ್ಗೆ ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು?